# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1128(1408)
ಉತ್ತರಿಸಬೇಕಾದ ದಿನಾಂಕ : 22.08.2025
ಸದಸ್ಯರ ಹೆಸರು : ಶ್ರೀ ಡಿ.ಎಸ್ ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚಿನ ದಿನಗಳಲ್ಲಿ ರಾಜ್ಯದಲ್ಲಿ ರೈತರ ಆತ್ಮಹತ್ಯೆ ಪ್ರಕರಣಗಳ ಸಂಖ್ಯೆ ಗಣನೀಯವಾಗಿ ಏರಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಇಲ್ಲ |
| ಆ) | ಕಳೆದ ಎರಡು ವರ್ಷಗಳಲ್ಲಿ (2023-25) ರೈತರ ಆತ್ಮಹತ್ಯೆ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | 2023-24 ರಿಂದ ಇಲ್ಲಿಯವರೆಗೆ ವರದಿಯಾಗಿರುವ ರೈತರ ಆತ್ಮಹತ್ಯೆ ಪ್ರಕರಣಗಳ ವಿವರವನ್ನು ಅನುಬಂಧ-1 ರಲ್ಲಿ ಒದಗಿಸಿದೆ. |
| ಇ) | ಆತ್ಮಹತ್ಯೆ ಮಾಡಿಕೊಂಡ ಕುಟುಂಬಗಳಿಗೆ ಪರಿಹಾರ ಬಿಡುಗಡೆ ಮಾಡುವ ಸಂದರ್ಭದಲ್ಲಿ ಯಾವುದಾದರೂ ವಿಳಂಬ ಅಥವಾ ತಾಂತ್ರಿಕ ಅಡಚಣೆ ಉಂಟಾಗಿದೆಯೇ; ಆತ್ಮಹತ್ಯೆ ಮಾಡಿಕೊಂಡ ಎಷ್ಟು ಕುಟುಂಬಗಳಿಗೆ ಇನ್ನೂ ಪರಿಹಾರ ನೀಡಿರುವುದಿಲ್ಲ; (ಜಿಲ್ಲಾವಾರು ಮಾಹಿತಿ ನೀಡುವುದು ) | ಜಿಲ್ಲಾಧಿಕಾರಿಗಳ ಕಛೇರಿಯಿಂದ ಪರಿಹಾರ ಪಾವತಿಗಾಗಿ ಡಿಬಿಟಿ ತಂತ್ರಾಂಶದ ಮೂಲಕ ಸ್ವೀಕೃತಗೊಳ್ಳುವ ಕೆಲವು ಪ್ರಕರಣಗಳಲ್ಲಿ ಬಿಲ್ಲು ತಯಾರಿಸಿ ಖಜಾನೆಗೆ ಸಲ್ಲಿಸಿದ ಸಂದರ್ಭದಲ್ಲಿ NPCI mapping ಆಗದೆ , Account closed or transferred, Account reached maximum credit limit, Inactive Aadhar ಮತ್ತು ಇನ್ನಿತರ ಕಾರಣಗಳಿಂದಾಗಿ ತಿರಸ್ಕೃತಗೊಳ್ಳುತ್ತವೆ. ಸದರಿ ಪ್ರಕರಣಗಳನ್ನು ಆಗಿಂದಾಗ್ಗೆ ಫಲಾನುಭವಿಗಳಿಂದ ಸರಿಪಡಿಸಿ ಪರಿಹಾರ ಪಾವತಿಗೆ ಕ್ರಮಕೈಗೊಳ್ಳಲಾಗುತ್ತಿದೆ. |
| ಈ) | ಈ ಪ್ರಕರಣಗಳಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದಿಂದ ಪೀಡಿತ ಕುಟುಂಬಗಳಿಗೆ ನೀಡಲಾಗಿರುವ ಪರಿಹಾರದ ಮೊತ್ತವೆಷ್ಟು; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು) | ವರದಿಯಾಗಿರುವ ಆತ್ಮಹತ್ಯೆ ಪ್ರಕರಣಗಳಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದಿಂದ ಪೀಡಿತ ಕುಟುಂಬಗಳಿಗೆ ನೀಡಲಾಗಿರುವ ಪರಿಹಾರ ಮೊತ್ತದ ವಿವರವನ್ನು ಅನುಬಂಧ-1ರಲ್ಲಿ ಒದಗಿಸಿದೆ. |
| ಉ) | ಈ ಆತ್ಮಹತ್ಯೆಗಳ ಮೂಲ ಕಾರಣಗಳನ್ನು ಗುರುತಿಸಿ ರೈತರ ಆರ್ಥಿಕ ಸ್ಥಿತಿಗತಿ ಸುಧಾರಿಸಲು ಸರ್ಕಾರ ಕೈಗೊಂಡಿರುವ ತಾತ್ಕಾಲಿಕ ಮತ್ತು ದೀರ್ಘಕಾಲಿಕ ಪರಿಹಾರ ಕ್ರಮಗಳೇನು? | ರೈತರ ಸಮಸ್ಯೆಗಳಿಗೆ ಸಕಾಲ ಸ್ಪಂದನೆ ನೀಡುವ ಮೂಲಕ ಆತ್ಮಹತ್ಯೆ ತಡೆಗಟ್ಟಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗುತ್ತಿದ್ದು, ಪ್ರಸ್ತುತ ಅನುಷ್ಠಾನದಲ್ಲಿರುವ ಎಲ್ಲಾ ಯೋಜನೆಗಳ ಮಾಹಿತಿಯನ್ನು ಅನುಬಂಧ-2ರಲ್ಲಿ ಒದಗಿಸಲಾಗಿದೆ. |

ಕಡತ ಸಂಖ್ಯೆ:ಆರ್‌ಡಿ /128/ಕೆಎಟಿ/ ಎಸ್‌ಎಸ್‌ಪಿ/2025

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು

# ಅನುಬಂಧ-1

## 2023-24 ರಿಂದ 2025-26 ವರದಿಯಾಗಿರುವ ರೈತರ ಆತ್ಮಹತ್ಯೆ ಪ್ರಕರಣಗಳು

| ಕ್ರ. ಸಂ | ಜಿಲ್ಲೆಗಳು | 2023-24 | | | | 2024-25 | | | | 2025-26 | | | |
|---|---|---|---|---|---|---|---|---|---|---|---|---|---|
| | | ವರದಿಯಾದ ಪ್ರಕರಣಗಳು | ಅರ್ಹ ಪ್ರಕರಣಗಳು | ಪರಿಹಾ ಪಾವತಿಯಾಗಿ ರುವ ಪ್ರಕರಣಗಳು | ಪರಿಹಾರ ವಿತರಿಸಿರುವ ಮೊತ್ತ (ರೂ ಕೋಟಿಗಳಲ್ಲಿ ) | ವರದಿಯಾದ ಪ್ರಕರಣಗಳು | ಅರ್ಹ ಪ್ರಕರಣಗಳು | ಪರಿಹಾರ ಪಾವತಿಯಾಗಿ ರುವ ಪ್ರಕರಣಗಳು | ಪರಿಹಾರ ವಿತರಿಸಿರುವ ಮೊತ್ತ (ರೂ ಕೋಟಿಗಳಲ್ಲಿ) | ವರದಿಯಾದ ಪ್ರಕರಣಗಳು | ಅರ್ಹ ಪ್ರಕರಣಗಳು | ಪರಿಹಾರ ಪಾವತಿಯಾಗಿ ರುವ ಪ್ರಕರಣಗಳು | ಪರಿಹಾರ ವಿತರಿಸಿರುವ ಮೊತ್ತ (ರೂ ಕೋಟಿಗಳಲ್ಲಿ) |
| 1 | ಬಾಗಲಕೋಟೆ | 31 | 30 | 30 | 1.50 | 31 | 31 | 31 | 1.55 | 9 | 9 | 9 | 0.45 |
| 2 | ಬಳ್ಳಾರಿ | 19 | 17 | 17 | 0.85 | 10 | 6 | 4 | 0.2 | 0 | 0 | 0 | 0 |
| 3 | ಬೆಂ(ಗ್ರಾ) | 0 | 0 | 0 | 0.00 | 0 | 0 | 0 | 0 | 0 | 0 | 0 | 0 |
| 4 | ಬೆಂಗಳೂರು(ನ | 1 | 1 | 1 | 0.05 | 0 | 0 | 0 | 0 | 0 | 0 | 0 | 0 |
| 5 | ಬೆಳಗಾವಿ | 119 | 101 | 101 | 5.05 | 91 | 75 | 63 | 3.15 | 8 | 8 | 8 | 0.4 |
| 6 | ಬೀದರ್ | 75 | 75 | 75 | 3.75 | 45 | 45 | 45 | 2.25 | 6 | 0 | 0 | 0 |
| 7 | ಚಾಮರಾಜನ | 2 | 1 | 1 | 0.05 | 4 | 3 | 3 | 0.15 | 0 | 0 | 0 | 0 |
| 8 | ಚಿಕ್ಕಬಳ್ಳಾಪುರ | 3 | 3 | 3 | 0.15 | 1 | 1 | 1 | 0.05 | 0 | 0 | 0 | 0 |
| 9 | ಚಿಕ್ಕಮಗಳೂ | 80 | 62 | 62 | 3.10 | 37 | 28 | 28 | 1.4 | 12 | 6 | 6 | 0.3 |
| 10 | ಚಿತ್ರದುರ್ಗ | 31 | 27 | 27 | 1.35 | 35 | 31 | 30 | 1.5 | 4 | 4 | 4 | 0.2 |
| 11 | ದಕ್ಷಿಣಕನ್ನಡ | 5 | 5 | 5 | 0.25 | 6 | 5 | 4 | 0.2 | 0 | 0 | 0 | 0 |
| 12 | ದಾವಣಗೆರೆ | 54 | 49 | 49 | 2.45 | 47 | 42 | 38 | 1.9 | 0 | 0 | 0 | 0 |
| 13 | ಧಾರವಾಡ | 100 | 77 | 77 | 3.85 | 72 | 52 | 36 | 1.8 | 0 | 0 | 0 | 0 |
| 14 | ಗದಗ | 33 | 26 | 26 | 1.30 | 44 | 27 | 26 | 1.3 | 2 | 2 | 2 | 0.1 |
| 15 | ಹಾಸನ | 43 | 39 | 39 | 1.95 | 46 | 41 | 27 | 1.35 | 1 | 1 | 1 | .0.05 |
| 16 | ಹಾವೇರಿ | 121 | 105 | 105 | 5.25 | 132 | 121 | 121 | 6.05 | 7 | 2 | 2 | 0.1 |
| 17 | ಕಲಬುರಗಿ | 88 | 68 | 68 | 3.40 | 104 | 83 | 62 | 3.1 | 14 | 14 | 14 | 0.7 |
| 18 | ಕೊಡಗು | 5 | 5 | 5 | 0.25 | 7 | 7 | 6 | 0.3 | 0 | 0 | 0 | 0 |
| 19 | ಕೋಲಾರ | 1 | 1 | 1 | 0.05 | 0 | 0 | 0 | 0 | 0 | 0 | 0 | 0 |
| 20 | ಕೊಪ್ಪಳ | 30 | 26 | 26 | 1.30 | 26 | 21 | 18 | 0.9 | 4 | 4 | 4 | 0.2 |
| 21 | ಮಂಡ್ಯ | 48 | 45 | 45 | 2.25 | 49 | 48 | 38 | 1.9 | 0 | 0 | 0 | 0 |
| 22 | ಮೈಸೂರು | 77 | 68 | 68 | 3.40 | 81 | 64 | 59 | 2.95 | 8 | 8 | 8 | 0.4 |
| 23 | ರಾಯಚೂರು | 22 | 17 | 17 | 0.85 | 24 | 17 | 17 | 0.85 | 2 | 1 | 1 | 0.05 |
| 24 | ರಾಮನಗರ | 7 | 7 | 7 | 0.35 | 3 | 3 | 2 | 0.1 | 0 | 0 | 0 | 0 |
| 25 | ಶಿವಮೊಗ್ಗ | 58 | 50 | 50 | 2.50 | 45 | 40 | 40 | 2 | 0 | 0 | 0 | 0 |
| 26 | ತುಮಕೂರು | 22 | 17 | 17 | 0.85 | 17 | 15 | 14 | 0.7 | 1 | 0 | 0 | 0 |
| 27 | ಉಡುಪಿ | 0 | 0 | 0 | 0.00 | 0 | 0 | 0 | 0 | 0 | 0 | 0 | 0 |
| 28 | ಉತ್ತರಕನ್ನಡ | 10 | 9 | 9 | 0.45 | 13 | 11 | 8 | 0.4 | 5 | 0 | 0 | 0 |
| 29 | ವಿಜಯಪುರ | 60 | 58 | 58 | 2.90 | 42 | 41 | 37 | 1.85 | 4 | 3 | 3 | 0.15 |
| 30 | ವಿಜಯನಗರ | 35 | 27 | 27 | 1.35 | 22 | 20 | 19 | 0.95 | 0 | 0 | 0 | 0 |
| 31 | ಯಾದಗಿರಿ | 70 | 66 | 66 | 3.30 | 48 | 42 | 38 | 1.9 | 3 | 3 | 3 | 0.15 |
| ಒಟ್ಟು | | **1250** | **1082** | **1082** | 54.10 | **1082** | **920** | **815** | 40.75 | **90** | **65** | **65** | 3.25 |

G. N. Sneheela

ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಕೆ.ಎ.ಟಿ. & ಬಾ.ನಿ)
ಕರ್ನಾಟಕ ಸರ್ಕಾರದ ಸಚಿವಾಲಯ
ಬೆಂಗಳೂರು – 560 001

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1128(1408)ಗೆ ಅನುಬಂಧ-2**

1. ಬೀಜಗಳ ಪೂರೈಕೆ: ಬೀಜಗಳ ಪೂರೈಕೆ ಯೋಜನೆಯಡಿ ರಾಜ್ಯದ ಎಲ್ಲಾ ವರ್ಗದ ರೈತರಿಗೆ ವಿವಿಧ ಕೃಷಿ ಬೆಳೆಗಳ ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ.

2. ಕೃಷಿ ಯಾಂತ್ರೀಕರಣ: ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುವು ಮಾಡಿಕೊಡಲು ಹಾಗೂ ಕೂಲಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು, ಕೃಷಿ ಯಾಂತ್ರೀಕರಣ ಯೋಜನೆಯಡಿ ಕೃಷಿ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯ ಧನವನ್ನು ಒದಗಿಸಲಾಗುತ್ತಿದೆ ಹಾಗೂ 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

3. ಕೃಷಿ ಸಂಸ್ಕರಣೆ: ಕೃಷಿ ಉತ್ಪನ್ನಗಳ ಸಂಸ್ಕರಣೆ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು, ಟಾರ್ಪಾಲಿನ್ ಮತ್ತು ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಹಾಯಧನದಡಿ ರೈತರಿಗೆ ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು ಮತ್ತು ಟಾರ್ಪಾಲಿನ್ ಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನದಡಿ ನೀಡಲಾಗುವುದು. ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ., ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯ ಧನವನ್ನು ಒದಗಿಸಲಾಗುತ್ತಿದೆ.

4. 'ಸೂಕ್ಷ್ಮ ನೀರಾವರಿ: ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಮಾರ್ಗಸೂಚಿ ಅನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಗರಿಷ್ಠ 5.0 ಹೆಕ್ಟೇರ್ ಪ್ರದೇಶದವರೆಗೆ ನೀಡಲು ಅವಕಾಶವಿರುತ್ತದೆ. ಇದರಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು 60:40 ಇದ್ದು, ರಾಜ್ಯದಲ್ಲಿ ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಹೆಚ್ಚುವರಿ ಸಹಾಯಧನವನ್ನು ಸೇರಿಸಿ, ಎಲ್ಲಾ ವರ್ಗದ ರೈತರಿಗೆ ಸೂಕ್ಷ್ಮ ನೀರಾವರಿ ಘಟಕಗಳ ಅಳವಡಿಕೆಗೆ ಶೇ. 90ರ ಸಹಾಯಧನವನ್ನು ನೀಡಲಾಗುತ್ತಿದೆ.

5. ಸಸ್ಯ ಸಂರಕ್ಷಣೆ: ಶೇ.50ರ ರಿಯಾಯಿತಿ ದರದಲ್ಲಿ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ ಮಾಡಲಾಗುತ್ತಿದೆ.

6. ರೈತ ಸಿರಿ ಕಾರ್ಯಕ್ರಮದಡಿ ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರಆದಾಯವನ್ನುಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠಎರಡು ಹೆಕ್ಟೇರ್ ಪ್ರದೇಶದಲ್ಲಿ

ಸಿರಿಧಾನ್ಯಗಳನ್ನು ಬೆಳೆದ ಎಲ್ಲಾ ರೈತರುಗಳಿಗೆ ಬೆಳೆ ಸಮೀಕ್ಷೆ ಆಧಾರದಂತೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು.

7. ಸಾವಯವ ಇಂಗಾಲ ಅಭಿಯಾನ: ರಾಜ್ಯದ ಕೃಷಿ ಭೂಮಿಯಲ್ಲಿ ಸಾವಯವ ಇಂಗಾಲದ ಪ್ರಮಾಣವನ್ನು ಹೆಚ್ಚಿಸಲು, ದ್ವಿದಳಧಾನ್ಯಗಳ ವಿಸ್ತೀರ್ಣ ಮತ್ತು ಉತ್ಪಾದನೆ ಹೆಚ್ಚಿಸುವ ಸಲುವಾಗಿ ಶೇ. 75ರ ರಿಯಾಯಿತಿ ದರದಲ್ಲಿ ಹಸಿರೆಲೆ ಗೊಬ್ಬರ ಬಿತ್ತನೆ ಬೀಜಗಳ ವಿತರಣೆ ಮಾಡಲಾಗುವುದು.

8. ಬೆಂಬಲ ಬೆಲೆ: ಕೇಂದ್ರ ಸರ್ಕಾರವು ಪ್ರತಿ ವರ್ಷ ಮುಂಗಾರು ಹಾಗು ಹಿಂಗಾರು ಹಂಗಾಮಿಗೆ ಮುಂಚಿತವಾಗಿ ಬೆಂಬಲ ಬೆಲೆ ಘೋಷಣೆ ಮಾಡುತ್ತಿದ್ದು, ಸಗಟು ಮಾರುಕಟ್ಟೆಯಲ್ಲಿ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಯಲ್ಲಿ ಮಾರಾಟವಾಗುವ ಸಂದರ್ಭಗಳಲ್ಲಿ ಬೆಂಬಲ ಬೆಲೆಯಲ್ಲಿ ರೈತರಿಂದ ಉತ್ಪನ್ನಗಳನ್ನು ಖರೀದಿಸಲಾಗುತ್ತಿದೆ. ಅಲ್ಲದೆ, ಅವಶ್ಯಕ ಸಂದರ್ಭಗಳಲ್ಲಿ ಕೇಂದ್ರ ಸರ್ಕಾರ ಘೋಷಿಸಿದ ಬೆಂಬಲ ಬೆಲೆಯ ಜೊತೆಗೆ ರಾಜ್ಯ ಸರ್ಕಾರದ ಪ್ರೋತ್ಸಾಹ ಧನವನ್ನೂ ಸಹ ನೀಡಲಾಗುತ್ತಿದೆ.

9. ಬೆಳೆ ವಿಮಾ ಯೋಜನೆ: ಈ ಯೋಜನೆಯಡಿ ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುವುದು. ರೈತರಿಗೆ ನೀಡುವವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ನೀಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅನುವು ಮಾಡಲಾಗುತ್ತಿದೆ.

10. ಪಿ.ಎಂ.ಕಿಸಾನ್ ಯೋಜನೆ: ಈ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಎಲ್ಲಾ ಅರ್ಹ ರೈತ ಕುಟುಂಬಗಳಿಗೆ ರೂ.6000 ಗಳನ್ನು 3 ಕಂತುಗಳಲ್ಲಿ ನೇರವಾಗಿ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲಾಗುತ್ತದೆ.

11. ಬೆಳೆ ಪರಿಹಾರ: ಪ್ರಾಕೃತಿಕ ವಿಕೋಪಗಳಿಂದ ಬೆಳೆ ಹಾನಿ ಸಂಭವಿಸಿದಲ್ಲಿ, ರಾಷ್ಟ್ರ ಹಾಗೂ ರಾಜ್ಯ ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ರೈತರಿಗೆ ಪರಿಹಾರ ನೀಡಲಾಗುತ್ತಿದೆ.

12. ಕೃಷಿ ಆವರ್ತ ನಿಧಿ: ರೈತರು ಬೆಳೆದ ಕೃಷಿ ಉತ್ಪನ್ನಗಳಿಗೆ ಬೆಲೆ ಕುಸಿತವಾದಲ್ಲಿ ಮಾರುಕಟ್ಟೆ ಮಧ್ಯ ಪ್ರವೇಶಕ್ಕಾಗಿ ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಆವರ್ತ ನಿಧಿಯನ್ನು ನಿರ್ವಹಿಸಲಾಗುತ್ತಿದೆ.

13. ರೈತರಿಗೆ ನೇರವಾಗಿ ಸಹಕಾರ ಸಂಘಗಳಿಂದ ಸಾಲದ ನೆರವು: ಸಹಕಾರ ಸಂಘಗಳ ಮೂಲಕ ರೈತರಿಗೆ ಶೂನ್ಯ ಬಡ್ಡಿಯಲ್ಲಿ ಗರಿಷ್ಠ ರೂ. 5.00 ಲಕ್ಷಗಳವರೆಗೆ ಅಲ್ಪಾವಧಿ ಸಾಲ ಮತ್ತು ಶೇ. 3ರ ಬಡ್ಡಿಯಲ್ಲಿ ರೂ. 15.00 ಲಕ್ಷಗಳವರೆಗೆ ಮಧ್ಯಮಾವಧಿ ಸಾಲವನ್ನು ನೀಡಲಾಗುತ್ತದೆ.

14. ಬೆಳೆ ಸಾಲಕ್ಕೆ ಸಹಾಯ ಧನ : ಈ ಯೋಜನೆಯಡಿ ವಾಣಿಜ್ಯ ಬ್ಯಾಂಕುಗಳು ಹಾಗೂ ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳಲ್ಲಿ ಅಲ್ಪಾವಧಿ ಸಾಲ ಪಡೆದ ರೈತರಿಗೆ ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ (SLBC) ಮೂಲಕ ಸಾಲದ ಮೊತ್ತ ರೂ.1.00,000/- ಮಿತಿಯೊಳಗಿನ ಬೆಳೆಸಾಲ/ಅಲ್ಪಾವಧಿ ಕೃಷಿ ಸಾಲವನ್ನು ಬ್ಯಾಂಕ್ ನಿಗದಿಪಡಿಸಿದ ಅವಧಿಯೊಳಗೆ ಪಾವತಿಸಿದ ರೈತರಿಗೆ ಶೇ.1 ರ ಬಡ್ಡಿ ರಿಯಾಯಿತಿ ನೀಡಲಾಗುವುದು.

15. ಕೃಷಿ ಭಾಗ್ಯ: ಕೃಷಿ ಭಾಗ್ಯ ಯೋಜನೆಯಡಿ ಕ್ಷೇತ್ರ ಬಂದು ನಿರ್ಮಾಣ, ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ), ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಹೊಂಡದಿಂದ ನೀರು ಎತ್ತಲು ಡೀಸಲ್/ಪೆಟ್ರೋಲ್/ಸೋಲಾರ್ ಪಂಪ್ ಸೆಟ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.80 ಹಾಗೂಪ.ಜಾ./ಪ.ಪಂ. ರೈತರಿಗೆಶೇ.90 ರ ಸಹಾಯ ಧನವನ್ನು ಒದಗಿಸಲಾಗುತ್ತಿದೆ ಹಾಗೂ ಸೂಕ್ಷ್ಮ (ತುಂತುರು/ಹನಿ) ನೀರಾವರಿ ಘಟಕಗಳ ಅಳವಡಿಕೆಗೆ ಶೇ.90 ರ ಸಹಾಯ ಧನವನ್ನು ಎಲ್ಲಾ ವರ್ಗದ ರೈತರಿಗೆ ನೀಡಲಾಗುತ್ತದೆ. ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ ನಿರ್ಮಾಣಕ್ಕೆ ಸಾಮಾನ್ಯ ವರ್ಗದ ರೈತರಿಗೆ ಶೇ.40 ಹಾಗೂ ಪ.ಜಾ./ಪ.ಪಂ. ರೈತರಿಗೆಶೇ.50 ರ ಸಹಾಯ ಧನವನ್ನು ಒದಗಿಸಲಾಗುತ್ತಿದೆ.

16. ಹೈಟೆಕ್ ಹಾರ್ವೆಸ್ಟರ್ ಹಬ್- ಹೈಟೆಕ್ ಹಾರ್ವೆಸ್ಟರ್ ಹಬ್ ಗಳ ಸ್ಥಾಪನೆಗೆ ಶೇ.40 ರಿಂದ ಶೇ.70 ರಷ್ಟು ಸಹಾಯ ಧನದಲ್ಲಿ ಕೃಷಿ ಯಂತ್ರಧಾರೆ ಕೇಂದ್ರಗಳು, ಇತರೆ ಸಂಘ-ಸಂಸ್ಥೆಗಳು ಹಾಗೂ ವೈಯಕ್ತಿಕ ಫಲಾನುಭವಿಗಳಿಗೆ ಪ್ರತಿ ಘಟಕಕ್ಕೆ ಗರಿಷ್ಠ ರೂ.100.00 ಲಕ್ಷಗಳಿಗೆ ಮೀರದಂತೆ ಅನುದಾನ ನೀಡಲಾಗುತ್ತದೆ.

17. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಕಾರ್ಯಕ್ರಮದಡಿ ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ" ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದುಹಾಗೂ ಅಳವಡಿಸಿದ ಪ್ರದೇಶದಲ್ಲಿ/ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆಗೆ ಕ್ರಮ ಕೈಗೊಳ್ಳಲಾಗಿದೆ.

18. ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ ಮತ್ತು ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-Oilseeds): ವಿವಿಧ ಆಹಾರ ಬೆಳೆಗಳು, ದ್ವಿದಳ ಧಾನ್ಯಗಳು, ಹತ್ತಿ, ಕಬ್ಬು ಮತ್ತು ಎಣ್ಣೆ ಕಾಳು ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ ಹಾಗೂ ಕೃಷಿ ಉಪಕರಣಗಳನ್ನುಶೇ.50ರ ಸಹಾಯಧನದಡಿ ನೀಡಲಾಗುತ್ತದೆ.

19. ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಸಾಂತ್ವನ/ಆತ್ಮಸ್ಥೈರ್ಯ ತುಂಬಲು ಹಿರಿಯ ಅಧಿಕಾರಿಗಳೊಂದಿಗೆ ಇನ್ಸ್‌ಪೆಕ್ಟರ್ ಆಫ್ ಪೋಲೀಸ್, ತಹಶೀಲ್ದಾರ್‌ರವರು ಮತ್ತು ಸಹಾಯಕ ಕೃಷಿ ನಿರ್ದೇಶಕರು ಮನೆಗಳಿಗೆ ಭೇಟಿ ನೀಡುತ್ತಾರೆ. ಅಷ್ಟೇ ಅಲ್ಲದೆ ಸರ್ಕಾರದ ವಿವಿಧ ಸವಲತ್ತುಗಳನ್ನು ಅಂತಹ ಕುಟುಂಬಗಳಿಗೆ ತಲುಪಿಸಲು ಜಿಲ್ಲಾ ಮಟ್ಟದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರತಿ ಅರ್ಹ ರೈತ ಆತ್ಮಹತ್ಯೆ ಪ್ರಕರಣಗಳಿಗೆ ರೂ.5.00 ಲಕ್ಷ ಪರಿಹಾರ ಧನವನ್ನು ಮೃತ ವ್ಯಕ್ತಿಯ ವಾರಸುದಾರರಿಗೆ ಆಯುಕ್ತರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ಆಯುಕ್ತಾಲಯ, ಕಂದಾಯ ಇಲಾಖೆಯಿಂದ ನೀಡಲಾಗುತ್ತಿದೆ. ಇಲಾಖೆಯ ಎಲ್ಲಾ ತರಬೇತಿಗಳಲ್ಲಿ ರೈತರಿಗೆ ಆತ್ಮಸ್ಥೈರ್ಯ ತುಂಬುವ ಕುರಿತು ಅರಿವು ಮೂಡಿಸಲಾಗುತ್ತಿದೆ.

G.N. Susheela

ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಕೆ.ಎ.ಟಿ. & ಬಾ.ವಿ)
ಕರ್ನಾಟಕ ಸರ್ಕಾರದ ಸಚಿವಾಲಯ
ಬೆಂಗಳೂರು - 560 001